ಸ್ವರ್ಣಜಯಂತಿ ಗ್ರಾಮ ಸ್ವರೋಜ್‌ಗಾರ್ ಹಾಗೂ ಶಹರಿ ರೋಜ್‌ಗಾರ್ ಯೋಜನೆ ಕುರಿತು.

1708(2336)

ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್.(ಚಾಮರಾಜ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಹಾಗೂ ಶಹರಿ ರೋಜ್‌ಗಾರ್ ಯೋಜನೆಯಡಿ ರಾಜ್ಯದಾದ್ಯಂತ ಕೆಲಸ ನಿರ್ವಹಿಸುತ್ತಿರುವ ಯೋಜನಾಧಿಕಾರಿಗಳು ಹಾಗೂ ಸಮುದಾಯ ಸಂಘಟಕರು ಯಾರ್ಯಾರು; ಜಿಲ್ಲಾವಾರು ತಿಳಿಸುವುದು;

ಆ) ಈ ಯೋಜನೆಯಡಿ ಕೆಲಸ ನಿರ್ವಹಿಸುತ್ತಿರುವವರನ್ನು ಖಾಯಂ ನೌಕರರಾಗಿ ನೇಮಕ ಮಾಡಿಕೊಳ್ಳಲಾಗಿದೆಯೇ ಅಥವಾ ಗೌರವಧನ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆಯೇ;

ಇ) ಕಳೆದ ನಾಲ್ಕು ತಿಂಗಳಿನಿಂದ ಇವರುಗಳಿಗೆ ವೇತನ ನೀಡಿಲ್ಲವೆಂಬುದು ನಿಜವೇ; ಹಾಗಾದರೆ ಕಾರಣಗಳೇನು;

ಈ) ಈ ಯೋಜನೆಯನ್ನು ನಿಲ್ಲಿಸಲು ಸರ್ಕಾರ ಯೋಚಿಸುತ್ತಿದೆಯೆ; ಈ ಯೋಜನೆಯಲ್ಲಿ ಕೆಲಸ ನಿರ್ವಹಿಸುತ್ತಿರುವವರ ಜೀವನೋಪಾಯದ ಗತಿಯೇನು?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆಯಡಿ ಯೋಜನಾಧಿಕಾರಿಗಳು ಹಾಗೂ ಸಮುದಾಯ ಸಂಘಟಕರು ಇರುವುದಿಲ್ಲ. ಶಹರಿ ರೋಜ್‌ಗಾರ್ ಯೋಜನೆ ಈ ಇಲಾಖೆಗೆ ಸಂಬಂಧಿಸಿರುವುದಿಲ್ಲ.

ಆ) ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆಯಡಿ ಕರ್ತವ್ಯ ನಿರ್ವಹಿಸುವವರನ್ನು ಇತರೆ ಇಲಾಖೆಗಳಿಂದ ನಿಯೋಜನೆ ಮೇಲೆ ತೆಗೆದುಕೊಳ್ಳಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಇಲ್ಲ.